ಎಸ್‌ಸಿಸಿಹೆಚ್-*11* *1* ಎಮ್‌ವಿಸಿ **7034/2025**
**ಪಿಡಬ್ಲ್ಯೂ4** ಗೌರಿ ಶಂಕರ್

**ದಿನಾಂಕ 27.04.2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಅರ್ಜಿದಾರರ ಪರ ಮಾನ್ಯ ವಕೀಲರಿಂದ.**

ನನ್ನ ಮುಖ್ಯ ವಿಚಾರಣಾ ಸಾಕ್ಷ್ಯವನ್ನು ಪ್ರಮಾಣ ಪತ್ರದ ರೂಪದಲ್ಲಿ ಸಲ್ಲಿಸಿದ್ದೇನೆ. ಅದರಲ್ಲಿರುವ ವಿಚಾರಗಳನ್ನು ನಾನೇ ಹೇಳಿ ಬರೆಯಿಸಿ ರುಜು ಮಾಡಿದ್ದು ಅದರಲ್ಲಿರುವ ವಿಚಾರಗಳು ಸತ್ಯವಾಗಿವೆ.

**ಪಾಟೀ ಸವಾಲುಃ 1ನೇ ಎದುರುದಾರರ ಪರ ಮಾನ್ಯ ವಕೀಲರಿಂದ.**

ನಾನು ಅರ್ಜಿದಾರರನ್ನು ಆಸ್ಪತ್ರೆಯಲ್ಲಿ ನೋಡಿಕೊಂಡಿದ್ದೇನೆ. ಗಾಯಾಳುವನ್ನು ನೋಡಿಕೊಳ್ಳಲು ಹೊರಗಿನವರಿಗೆ ಅವಕಾಶ ಇಲ್ಲ ಎಂದರೆ ಆ ಬಗ್ಗೆ ನನಗೆ ಗೊತ್ತಿಲ್ಲ. ಆಸ್ಪತ್ರೆಯವರು ನನಗೆ ಗಾಯಾಳುವನ್ನು ನೋಡಿಕೊಳ್ಳಲು ಅನುಮತಿ ನೀಡಿರಲಿಲ್ಲ, ಆದರೆ ಅರ್ಜಿದಾರರ ಕುಟುಂಬದವರು ನನಗೆ ಕೇಳಿಕೊಂಡಿದ್ದರು. ಆ ಬಗ್ಗೆ ನಾನು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನನಗೆ ಅರ್ಜಿದಾರರು ರೂ.12,000/- ನೀಡುತ್ತಿರಲಿಲ್ಲ ಮತ್ತು ಅರ್ಜಿದಾರರಿಗೆ ಹೆಚ್ಚಿ ನ ಪರಿಹಾರ ಸಿಗಲಿ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಆಸ್ಪತ್ರೆಯ ಯಾವುದೇ ದಾಖಲಾತಿಗಳಲ್ಲಿ ನನ್ನ ಹೆಸರು ಇಲ್ಲ ಎಂದರೆ ಸರಿ. ನನ್ನನ್ನು ನೇಮಿಸಿಕೊಂಡ ಬಗ್ಗೆ ಮತ್ತು ನಾನು ಅರ್ಜಿದಾರರನ್ನು ನೋಡಿಕೊಳ್ಳುತ್ತಿದ್ದ ಬಗ್ಗೆ ದಾಖಲಾತಿ ಹಾಜರುಪಡಿಸಿಲ್ಲ. ಪ್ರಮಾಣ ಪತ್ರದಲ್ಲಿ ತಿಳಿಸಿರುವ ವ್ಯಕ್ತಿ ನಾನೇ ಮತ್ತು ಅದರಲ್ಲಿ ನಮೂದಿಸಿದ ವಿಳಾಸದಲ್ಲಿ ವಾಸವಾಗಿರುವ ಬಗ್ಗೆ ದಾಖಲಾತಿಯನ್ನು ಹಾಜರುಪಡಿಸಿಲ್ಲ. ಅರ್ಜಿದಾರರಿಗೆ ಪರಿಚಯ ಇಲ್ಲದೇ ಇದ್ದರೂ ಸಹ ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

2ನೇ ಎದುರುದಾರರ ಪರ ಮಾನ್ಯ ವಕೀಲರು ಗೈರು ಹಾಜರಾದ ಕಾರಣ ಪಾಟೀ ಸವಾಲು ಏನೂ ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ).**

**(ಓ.ಹೇ.ಕೇ.ಸ.ಇ.)**

**1ನೇ ಎಸ್‌ಸಿಜೆ ಮತ್ತು ಎಸಿಜೆಎಮ್**

**ಬೆಂಗಳೂರು**